ಕೋಲಾರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು

209(310); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ)

ಅ) ಕೋಲಾರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಯಾವ ಸ್ಥಳ (ತಾಲ್ಲೂಕು) ಗುರುತು ಮಾಡಲಾಗಿದೆ;

ಇ) ಮಂಜೂರು ಮಾಡಿದ್ದಲ್ಲಿ, ಯಾವ ವರ್ಷದಿಂದ ಕಾಲೇಜು ಪ್ರಾರಂಭಿಸಲಾಗುವುದು?

ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) ಕೋಲಾರ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಯಾವುದೇ ಸ್ಥಳವನ್ನು ಗುರುತಿಸಿರುವುದಿಲ್ಲ.

ಇ) ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಹಂತ ಹಂತವಾಗಿ ಒದಗಿಸುವುದು ಸರ್ಕಾರದ ನೀತಿಯಾಗಿದೆ ಅದರಂತೆ, ಮುಂಬರುವ ಶೈಕ್ಷಣಿಕ ಸಾಲುಗಳಲ್ಲಿ ಕೋಲಾರ ಜಿಲ್ಲೆಯಲ್ಲಿ ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿಗಳನ್ವಯ ಜಿಲ್ಲೆಯಲ್ಲಿ ಲಭ್ಯವಿರುವ ಮೂಲಭೂತ ಸೌಲಭ್ಯಗಳು ಹಾಗೂ ಅನುದಾನದ ಲಭ್ಯತೆಯನ್ನಾಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಪರಿಶೀಲಿಸಿ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.